ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03**

E-mail Id: adpimusicsection@gmail.com ದೂರವಾಣಿ ಸಂಖ್ಯೆ: 080-23360109

ಸಂಖ್ಯೆ:ವಿ1/ವಿಸಪ/ಅ.ಸೂ/32/2021 ದಿನಾಂಕ:25/11/2022

## ಸುತ್ತೋಲೆ

**ವಿಷಯ:** ಡಿಸೆಂಬರ್-2022 ರ ಮಾಹೆಯಲ್ಲಿ ನಡೆಯಲಿರುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಲಿಖಿತ ಪರೀಕ್ಷೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

************

ದಿನಾಂಕ:18.12.2022 ರಂದು ನಡೆಯುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಲಿಖಿತ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣ **www.sslc.karnataka.gov.in** ನಲ್ಲಿ ನೀಡಲಾಗಿರುವ ಲಿಂಕ್ ಮೂಲಕ **ದಿನಾಂಕ:28.11.2022 ರಿಂದ** ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಡೌನ್‌ಲೋಡ್ ಮಾಡಿಕೊಂಡ ನಂತರ ಪರಿಶೀಲಿಸಿ ತಪ್ಪುಗಳಿದ್ದಲ್ಲಿ ಅಂತಹ ಪ್ರವೇಶ ಪತ್ರಗಳನ್ನು ಸೂಕ್ತ ದಾಖಲೆಗಳೊಂದಿಗೆ **ದಿನಾಂಕ:03.12.2022** ರೊಳಗೆ ನೇರವಾಗಿ ಮಂಡಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು.

1. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಕಡ್ಡಾಯವಾಗಿ ಪಾಲಿಸುವುದು.
2. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಅರ್ಜಿಯಲ್ಲಿ ನೋಂದಾಯಿಸಲಾದಂತಹ ದೂರವಾಣಿ ಸಂಖ್ಯೆಗೆ ಸಂದೇಶ ಬಂದ ನಂತರ ಕೂಡಲೇ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.
3. ಜೂನಿಯರ್ ಗ್ರೇಡ್ ಅಭ್ಯರ್ಥಿಗಳು ತಮ್ಮ ಹೆಸರು, ತಂದೆ, ತಾಯಿ ಹೆಸರು, ವಿಳಾಸ, ಜನ್ಮ ದಿನಾಂಕ, ಭಾವಚಿತ್ರ, ಸಹಿ, ಮತ್ತು ಮೊಬೈಲ್ ಸಂಖ್ಯೆ ಇವುಗಳನ್ನು ತಿದ್ದುಪಡಿ ಮಾಡಿಸಿಕೊಳ್ಳಬಹುದಾಗಿರುತ್ತದೆ.
4. ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ಅಭ್ಯರ್ಥಿಗಳ **AUTO FETCH** ಆಗಿರುವ ಮಾಹಿತಿಯನ್ನು ಹೊರತುಪಡಿಸಿ, ಅಭ್ಯರ್ಥಿಯ ಭಾವಚಿತ್ರ, ಸಹಿ, ಮೊಬೈಲ್ ಸಂಖ್ಯೆ ಇವುಗಳನ್ನು ಮಾತ್ರ ತಿದ್ದುಪಡಿ ಮಾಡಿಸಿಕೊಳ್ಳಬಹುದಾಗಿದೆ.
5. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ವಿಷಯ ಸಂಕೇತವನ್ನು ಖಚಿತ ಪಡಿಸಿಕೊಳ್ಳುವುದು.
6. ಯಾವುದೇ ಅಭ್ಯರ್ಥಿಯ **ವಿಷಯ ಬದಲಾವಣೆ** ಮತ್ತು **ಕೇಂದ್ರ ಬದಲಾವಣೆಗೆ** ಅವಕಾಶವಿರುವುದಿಲ್ಲ. ಈ ಕುರಿತಂತೆ ಮಂಡಳಿಯನ್ನು ಅನಗತ್ಯವಾಗಿ ಸಂಪರ್ಕಿಸದಂತೆ ತಿಳಿಸಿದೆ.
7. ಲಿಖಿತ ಪರೀಕ್ಷೆ ಪ್ರಾರಂಭವಾಗುವ ದಿನಾಂಕದ **ಬೆಳಗ್ಗೆ 10.00 ಗಂಟೆಯ ನಂತರ** ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

8. ತಿದ್ದುಪಡಿ ಬಯಸಿದ್ದಲ್ಲಿ **ರೂ.200/- ಗಳ ಶುಲ್ಕವನ್ನು** ಇತರೆ ಪರೀಕ್ಷೆಗಳ ನೆಫ್ಟ್ ಚಲನ್ ಮೂಲಕ ಪಾವತಿಸಿ ಮೂಲ ಚಲನ್ ಅನ್ನು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವುದು.

**ಮೇಲ್ಕಂಡ ಅಂಶಗಳಂತೆ ಎಲ್ಲಾ ಅಭ್ಯರ್ಥಿಗಳು ಪ್ರವೇಶ ಪತ್ರಗಳನ್ನು ಕಡ್ಡಾಯವಾಗಿ ಪರಿಶೀಲಿಸಿಕೊಂಡು, ದಿನಾಂಕ:03.12.2022 ರೊಳಗೆ ವಿವರಗಳನ್ನು ಸರಿಪಡಿಸಿಕೊಳ್ಳಲು ಸೂಚಿಸಿದೆ. ಕೊನೆಯ ದಿನಾಂಕದ ನಂತರ ಬರುವ ಮನವಿಗಳನ್ನು ಪರಿಗಣಿಸುವುದಿಲ್ಲ.**

[ಗೋಪಾಲಕೃಷ್ಣ ಹೆಚ್.ಎನ್]
ನಿರ್ದೇಶಕರು (ಪರೀಕ್ಷೆಗಳು)

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ. ಮತ್ತು ತಮ್ಮ ಕಛೇರಿಯ ಸಂಗೀತ ಪರೀಕ್ಷೆಯ ನೋಡಲ್ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಸೂಚಿಸುವುದು.
2. ರಾಜ್ಯದ ಎಲ್ಲಾ ಜಿಲ್ಲೆಗಳ ಸಂಗೀತ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಗಣಕಶಾಖೆ, ಇತರೆ ಪರೀಕ್ಷಕೆಗಳು ರವರಿಗೆ ಕಳುಹಿಸುತ್ತಾ ನಿಗದಿಪಡಿಸಿದ ದಿನಾಂಕದಂದು ಮಂಡಳಿಯ ಜಾಲತಾಣದಲ್ಲಿ ಪ್ರವೇಶ ಪತ್ರ ಬಿಡುಗಡೆಗೆ ಅಗತ್ಯ ಕ್ರಮವಹಿಸುವುದು.
4. ಕಛೇರಿ ಪ್ರತಿ.